**Akashvani : Bangalore**
**National Bulletin In Kannada**
**07.02.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**೧. ನೂರು ಗಿಗಾ ವ್ಯಾಟ್ ಸೌರಶಕ್ತಿ ಉತ್ಪಾದನೆ; ಹೊಸ ಇತಿಹಾಸ ನಿರ್ಮಿಸಿದ ಭಾರತ**

**೨. ಐದು ವರ್ಷಗಳ ನಂತರ ರೆಪೊ ದರ ಕಡಿತಗೊಳಿಸಿದ ಭಾರತೀಯ ರಿಸರ್ವ್ ಬ್ಯಾಂಕ್**

**೩. ಇ-ನ್ಯಾಮ್ ಪೋರ್ಟಲ್‌ನಲ್ಲಿ ೪ ಸಾವಿರದ ೩೦೦ ಕೃಷಿ ಉತ್ಪಾದಕಾ ಸಂಸ್ಥೆಗಳ ನೋಂದಣಿ**

**೪. ದೆಹಲಿ ವಿಧಾನಸಭಾ ಚುನಾವಣೆ; ನಾಳೆ ಮತ ಎಣಿಕೆಗೆ ಸಕಲ ಸಿದ್ಧತೆ**

**೫. ೩೮ನೇ ರಾಷ್ಟ್ರೀಯ ಕ್ರೀಡಾಕೂಟ; ಪುರುಷರ ಸೂಪರ್ ಹೆವಿವೇಯ್ಟ್ ವಿಭಾಗದಲ್ಲಿ ಉತ್ತರಾಖಂಡದ ನರೇಂದರ್‌ಗೆ ಚಿನ್ನ**

**<><*<><>*><>**

ಈ ವರ್ಷ ಭಾರತ, ೧೦೦ ಗಿಗಾ ವ್ಯಾಟ್ ಸೌರಶಕ್ತಿ ಉತ್ಪಾದನಾ ಸಾಮರ್ಥ್ಯ ಹೊಂದುವ ಮೂಲಕ ಹೊಸ ಇತಿಹಾಸ ನಿರ್ಮಾಣ ಮಾಡಿದೆ ಎಂದು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ೨೦೩೦ರ ವೇಳೆಗೆ ಈ ಸಾಮಥ್ಯವನ್ನು ೫೦೦ ಗಿಗಾ ವ್ಯಾಟ್‌ಗೆ ಹೆಚ್ಚಿಸಲಾಗುವುದು. ಭಾರತದಲ್ಲಿ ಸೌರಶಕ್ತಿ ಬೇಡಿಕೆ ಶೇಕಡ ೩೫ ರಷ್ಟು ಹೆಚ್ಚಳವಾಗಿದ್ದು, ನವೀಕರಿಸಬಹುದಾದ ಇಂಧನ ಬಳಕೆಗೆ ಸರ್ಕಾರ ಹೆಚ್ಚು ಒತ್ತು ನೀಡಿದೆ. ಪರಿಸರ ಸ್ನೇಹಿ ಇಂಧನ ಉತ್ಪಾದನೆಯಲ್ಲಿ ಭಾರತವು ಜಗತ್ತಿನಲ್ಲೇ ಮುಂಚೂಣಿ ರಾಷ್ಟ್ರವಾಗಿರುವುದನ್ನು ಈ ಬೆಳವಣಿಗೆ ದೃಢಪಡಿಸಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

**<><*<><>*><>**

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ, ಐದು ವರ್ಷಗಳ ನಂತರ ಇದೇ ಮೊದಲ ಬಾರಿಗೆ ಪಾಲಿಸಿ ರೆಪೊ ದರವನ್ನು ೨೫ ಬೇಸಿಸ್ ಪಾಯಿಂಟ್‌ಗಳನ್ನು ಕಡಿತಗೊಳಿಸಿದೆ. ರೆಪೊ ದರವನ್ನು ಈಗಿನ ಶೇಕಡ ೬.೫೦ ರಿಂದ ಶೇಕಡ ೬.೨೫ ಕ್ಕೆ ಇಳಿಸಿದೆ. ಮೂರು ದಿನಗಳ ವಿತ್ತೀಯ ನೀತಿ ಸಮಿತಿ ಸಭೆಯ ನಂತರ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಮುಂಬೈನಲ್ಲಿಂದು ಈ ವಿಷಯ ತಿಳಿಸಿದರು. ಮಂದಗತಿಯ ಆರ್ಥಿಕತೆಯನ್ನು ಪುನಶ್ಚೇತನಗೊಳಿಸಲು ಈ ಕ್ರಮ ಸಹಕಾರಿಯಾಗಲಿದೆ ಎಂದು ಹೇಳಲಾಗಿದೆ. ಫೆಬ್ರವರಿ ೨೦೨೩ ರಲ್ಲಿ ೨೫ ಬೇಸಿಕ್ ಪಾಯಿಂಟ್ ಏರಿಕೆಯೊಂದಿಗೆ ಶೇಕಡ ೬.೫ ಕ್ಕೆ ಹೆಚ್ಚಿಸಲಾಗಿತ್ತು. ಸರ್ವಾನುಮತದಿಂದ ರೆಪೊ ದರ ಇಳಿಸಲು ತೀರ್ಮಾನ ತೆಗೆದುಕೊಳ್ಳಲಾಗಿದೆ. ಹಣದುಬ್ಬರವನ್ನು ನಿಯಂತ್ರಣದಲ್ಲಿಟ್ಟು, ಆರ್ಥಿಕ ಬೆಳವಣಿಗೆಗೆ ಪುಷ್ಠಿ ನೀಡಲು ಈ ಕ್ರಮ ಅನುಕೂಲವಾಗಲಿದೆ ಎಂದರು.  ಪ್ರಸಕ್ತ ಹಣಕಾಸು ವರ್ಷಕ್ಕೆ ಸಿಪಿಐ ಹಣದುಬ್ಬರವು ಶೇಕಡ ೪.೮ ರಷ್ಟಿದ್ದು, ನಾಲ್ಕನೇ ತ್ರೈಮಾಸಿಕದಲ್ಲಿ ಶೇಕಡ ೪.೪ ರಷ್ಟಿರುತ್ತದೆ ಎಂದು ಆರ್‌ಬಿಐ ಅಂದಾಜು ಮಾಡಿದೆ. ಬ್ಯಾಂಕಿಂಗ್ ವಂಚನೆಗಳನ್ನು ತಪ್ಪಿಸಲು, ಭಾರತೀಯ ಬ್ಯಾಂಕುಗಳಿಗೆ 'bಚಿಟಿಞ.iಟ' ವಿಶೇಷ ಇಂಟರ್ನೆಟ್ ಡೊಮೇನ್ ಅನ್ನು ರಿಸರ್ವ್ ಬ್ಯಾಂಕ್ ಜಾರಿಗೆ ತರಲಿದೆ ಎಂದು ಗವರ್ನರ್ ಸಂಜಯ್ ಮಲ್ಹೋತ್ರಾ ತಿಳಿಸಿದರು.

**ಧ್ವನಿ: ಸಂಜಯ್ ಮಲ್ಹೋತ್ರಾ, ಗವರ್ನರ್ ( ೩೪ ಸೆಕೆಂಡ್ )**

**<><*<><>*><>**

ಕರ್ನಾಟಕದ ಕಲೆ, ಸಂಸ್ಕೃತಿ ಶ್ರೀಮಂತವಾಗಿದೆ ಹಾಗೂ ಜಗತ್ತಿನ ಗಮನ ಸೆಳೆಯುತ್ತಿದೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಪ್ರತಿಪಾದಿಸಿದ್ದಾರೆ. ರಾಣೆಬೆನ್ನೂರಿನಲ್ಲಿ ಏರ್ಪಡಿಸಿದ್ದ 'ಕರ್ನಾಟಕ ವೈಭವ' ಕಾರ್ಯಕ್ರಮಕ್ಕೆ ಇಂದು ಚಾಲನೆ ನೀಡಿ ಅವರು ಮಾತನಾಡಿದರು. ಬಳಿಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮಾತನಾಡಿ, ಕರ್ನಾಟಕ ಕಲೆ, ಸಾಹಿತ್ಯ, ಸಂಸ್ಕೃತಿಯಲ್ಲಿ ತನ್ನದೇ ಆದ ಇತಿಹಾಸ ಹೊಂದಿದ್ದು, ಕರ್ನಾಟಕದ ಸಂಸ್ಕೃತಿ ಶ್ರೀಮಂತ ಮತ್ತು ವೈವಿಧ್ಯಮಯವಾಗಿದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿಯವರ ಪತ್ನಿ ಡಾ.ಸುದೇಶ್ ಧನ್‌ಕರ್, ಮೊದಲಾದವರು ಭಾಗಿಯಾಗಿದ್ದರು.

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ, ಸೋಮವಾರದಿಂದ ಮೂರು ದಿನ ಫಾನ್ಸ್‌ಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ಕೃತಕ ಬುದ್ಧಿಮತ್ತೆ ಶೃಂಗಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ

ಕಾರ್ಯದರ್ಶಿ ವಿಕ್ರಮ್ ಮಿಶ್ರಿ ದೆಹಲಿಯಲ್ಲಿ ತಿಳಿಸಿದ್ದಾರೆ. ಇದೇ ತಿಂಗಳ ೧೨ ಮತ್ತು ೧೩ ರಂದು ಪ್ರಧಾನಿ ನರೇಂದ್ರ ಮೋದಿ, ಅಮೆರಿಕಾಕ್ಕೆ ಭೇಟಿ ನೀಡಲಿದ್ದು, ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ತಿಳಿಸಿದ್ದಾರೆ.

<><*<><>*><>

ಕಳೆದ ವರ್ಷದ ಅಂತ್ಯದವರೆಗೆ ದೇಶದಲ್ಲಿ ೪ ಸಾವಿರದ ೩೦೦ ಕೃಷಿ ಉತ್ಪಾದಕಾ ಸಂಸ್ಥೆಗಳನ್ನು ಇ-ನ್ಯಾಮ್ ಪೋರ್ಟಲ್‌ನಲ್ಲಿ ನೊಂದಾಯಿಸಿಕೊಂಡಿವೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ರಾಜ್ಯಸಭೆಗೆ ಇಂದು ತಿಳಿಸಿದ್ದಾರೆ. ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಸಚಿವರು, ರೈತ ಉತ್ಪಾದಕರ ಸಂಘಟನೆಯಿಂದ ೪ ಕೋಟಿ ೮೦ ಲಕ್ಷಕ್ಕೂ ಹೆಚ್ಚು ರೈತರು ೨೪೯ ಕೋಟಿ ರೂಪಾಯಿಗಳ ಪಾವತಿ ಪಡೆದಿದ್ದಾರೆ ಎಂದರು. ದೇಶಾದ್ಯಂತ ಇಲ್ಲಿಯವರೆಗೂ ೧೦ ಸಾವಿರಕ್ಕೂ ಹೆಚ್ಚು ರೈತ  ಉತ್ಪಾದಕ ಸಂಘಟನೆಯನ್ನು ರಚಿಸಲಾಗಿದೆ. ದೇಶಾದ್ಯಂತ ೧ ಸಾವಿರದ ೪೦೦ ಕ್ಕೂ ಹೆಚ್ಚು ಮಾರುಕಟ್ಟೆಗಳು ಇ-ನ್ಯಾಮ್ ಪೋರ್ಟಲ್‌ಗೆ ಸೇರಿವೆ. ರೈತರಿಗೆ ಅನುಕೂಲವಾಗುವಂತೆ ಇ-ನ್ಯಾಮ್‌ನಲ್ಲಿ ಪ್ರತ್ಯೇಕ ಫಾರ್ಮ್ ಗೇಟ್ ಮಾಡ್ಯೂಲ್ ಅನ್ನು ಸ್ಥಾಪಿಸಿರುವುದರಿಂದ ರೈತರು ಮನೆಯಲ್ಲಿಯೇ ಕುಳಿತು ಸ್ಪರ್ಧಾತ್ಮಕ ಬೆಲೆ ಪಡೆಯಲು ಅನುಕೂಲವಾಗಿದೆ ಎಂದರು.

<><*<><>*><>

ವಜ್ರ ಉದ್ಯಮ ಗುಣಮಟ್ಟ ಕಾಪಾಡಿಕೊಳ್ಳಲು ಸ್ವಯಂ ನಿಯಂತ್ರಣ ಅಗತ್ಯವಾಗಿದೆ ಎಂದು ಕೇಂದ್ರ ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ರಾಜ್ಯಸಭೆಗೆ ಇಂದು ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿ ಪ್ರಶ್ನೋತ್ತರವೇಳೆಯಲ್ಲಿ ಉತ್ತರಿಸಿದ ಸಚಿವರು, ಸರ್ಕಾರ ಈ ಉದ್ಯಮದ ವ್ಯವಹಾರದಲ್ಲಿ ಯಾವುದೇ ಹಸ್ತಕ್ಷೇಪ ಮಾಡಲು ಬಯಸುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಕಳೆದ ೪ ವರ್ಷಗಳಲ್ಲಿ ಹಲವು ಕಾರಣಗಳಿಂದ ವಜ್ರ ರಫ್ತು ಪ್ರಮಾಣ ಕಡಿಮೆಯಾಗಿದೆ. ಆದಾಗ್ಯೂ, ವಜ್ರ ರಫ್ತಿನ ಒಟ್ಟಾರೆ ಮೌಲ್ಯದಲ್ಲಿ ಹೆಚ್ಚಿನ ಬದಲಾವಣೆಯಾಗಿಲ್ಲ.  ಪ್ರಸ್ತುತ ಹಣಕಾಸು ವರ್ಷದ ಅಂತ್ಯದ ವೇಳೆಗೆ ದೇಶದ ರಫ್ತು ೮೦೦ ಬಿಲಿಯನ್ ಡಾಲರ್‌ಗಳನ್ನು ದಾಟುವ ನಿರೀಕ್ಷೆಯಿದೆ ಎಂದು ಹೇಳಿದರು.

<><*<><>*><>

ದೆಹಲಿ ವಿಧಾನಸಭೆ ಚುನಾವಣೆಯ ಮತ ಎಣಿಕೆ ನಾಳೆ ನಡೆಯಲಿದ್ದು, ಇದಕ್ಕಾಗಿ ಮೂರು ಹಂತದ ಭದ್ರತಾ ವ್ಯವಸ್ಥೆ ಕೈಗೊಳ್ಳಲಾಗಿದೆ. ಮತ ಎಣಿಕೆ ಕೇಂದ್ರಗಳಿಗೆ ಅಧಿಕೃತ ಸಿಬ್ಬಂದಿಗೆ ಮಾತ್ರ ಅವಕಾಶ ನೀಡಲಾಗುವುದು. ಮತ ಎಣಿಕೆ ಕೇಂದ್ರ ಆವರಣದಲ್ಲಿ ಮೊಬೈಲ್ ಫೋನ್ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ದೆಹಲಿಯ ಮುಖ್ಯ ಚುನಾವಣಾಧಿಕಾರಿ ಆರ್.ಆಲಿಸ್ ವಾಜ್ ತಿಳಿಸಿದ್ದಾರೆ. ೭೦ ಸದಸ್ಯ ಬಲದ ದೆಹಲಿ ವಿಧಾನಸಭೆಗೆ ಫೆಬ್ರವರಿ ೫ ರಂದು ಮತದಾನ ನಡೆದಿತ್ತು. ಮತ ಎಣಿಕೆಗಾಗಿ ದೆಹಲಿಯ ೧೧ ಜಿಲ್ಲೆಗಳಲ್ಲಿ ೧೯ ಎಣಿಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

<><*<><>*><>

ಉತ್ತರಾಖಂಡದ ಡೆಹರಾಡೂನ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕೂಟದ ಪುರುಷರ ಸೂಪರ್ ಹೆವಿವೇಯ್ಟ್ ೯೨ ಕೆಜಿ ವಿಭಾಗದಲ್ಲಿ ಉತ್ತರಾಖಂಡದ ನರೇಂದರ್ ಚಿನ್ನದ ಪದಕ ಮುಡಿಗೇರಿಸಿಕೊಂಡಿದ್ದಾರೆ. ರಾಜಸ್ಥಾನದ ತರುಣ್ ಶರ್ಮಾ ಬೆಳ್ಳಿ, ದೆಹಲಿಯ ವಿಶಾಲ್ ಕುಮಾರ್ ಮತ್ತು ತೆಲಂಗಾಣದ ಅಬ್ದುಲ್ಲಾ ಜಾವೀದ್ ಜಬ್ರಿ ಕಂಚಿನ ಪದಕ ಪಡೆದಿದ್ದಾರೆ. ಪುರುಷರ ಫುಟ್‌ಬಾಲ್ ಪಂದ್ಯದಲ್ಲಿ ಮೂರನೇ ಸ್ಥಾನಕ್ಕಾಗಿ ನಡೆದ ಪ್ಲೇ ಆಫ್‌ನಲ್ಲಿ ದೆಹಲಿ ತಂಡ, ಅಸ್ಸಾಂ ತಂಡವನ್ನು ೪-೨ ಗೋಲುಗಳ ಅಂತರದಿಂದ ಪರಾಭವಗೊಳಿಸಿ, ಕಂಚಿನ ಪದಕ ಮುಡಿಗೇರಿಸಿಕೊಂಡಿತು.

<><*<><>*><>

ಪ್ರತಿಯೊಬ್ಬ ಕ್ರೀಡಾಪಟುಗಳು ಬೊಜ್ಜುತನ ನಿವಾರಿಸಲು ಆದ್ಯತೆ ನೀಡಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ನೀಡಿದ್ದ ಕರೆಯನ್ನು ಬೆಂಬಲಿಸಲು ಭಾರತೀಯ ಕ್ರೀಡಾಪಟುಗಳು ಮತ್ತು ಫಿಟ್‌ನೆಸ್ ಪ್ರಭಾವಿಗಳು ಆಸಕ್ತಿ ತೋರಿದ್ದಾರೆ. ಭಾರತೀಯ ಹಾಕಿ ದಂತಕಥೆ ಪಿ.ಆರ್.ಶ್ರೀಜೇಶ್ ಆಹಾರ ಪದ್ಧತಿಯ ಪಾಲನೆಯ ಅಗತ್ಯವನ್ನು ಒತ್ತಿ ಹೇಳಿದ್ದಾರೆ. ಆರೋಗ್ಯಕರ ಮತ್ತು ಸಂತೋಷದ ಜೀವನಕ್ಕೆ ಉತ್ತಮ ಆಹಾರ ಸೇವನೆಯು ಮೊದಲ ಹೆಜ್ಜೆ ಎಂದು ಅವರು ಸಾಮಾಜಿಕ ಮಾಧ್ಯಮಲ್ಲಿ ತಿಳಿಸಿದ್ದಾರೆ. ಟೇಬಲ್ ಟೆನಿಸ್ ತಾರೆ ಮಣಿಕಾ ಬಾತ್ರಾ, ಇದಕ್ಕೆ ಒತ್ತು ನೀಡಿ, ಜನರು ಪೌಷ್ಟಿಕಾಂಶವುಳ್ಳ ಆಹಾರ ಪದಾರ್ಥಗಳ ಆಯ್ಕೆಗೆ ಆದ್ಯತೆ ನೀಡಬೇಕು ಎಂದರು. ಫಿಟ್ ಇಂಡಿಯಾ ಐಕಾನ್ ಮತ್ತು ಎಂಎಂಎ ಚಾಂಪಿಯನ್ ಸಂಗ್ರಾಮ್

ಸಿಂಗ್, ಆರೋಗ್ಯ ಕಾಪಾಡಿಕೊಳ್ಳಲು ಜನರು ಸ್ವಸ್ಥ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

**<><*<><>*><>**

ಚುನಾವಣಾ ಆಯೋಗ ರಾಜಕೀಯ ಪಕ್ಷಗಳನ್ನು ಆದ್ಯತೆ ಪಾಲುದಾರರನ್ನಾಗಿ ಪರಿಗಣಿಸುತ್ತದೆ. ಮತದಾರರನ್ನು ಪ್ರಮುಖ ಪಾಲುದಾರರಾಗಿರುತ್ತಾರೆ ಎಂದು ಸ್ಪಷ್ಟಪಡಿಸಿದೆ. ಮಹಾರಾಷ್ಟ್ರ ಚುನಾವಣಾ ದತ್ತಾಂಶಗಳ ಕುರಿತು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎತ್ತಿರುವ ಕೆಲವು ಆಕ್ಷೇಪಗಳ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಸಾಮಾಜಿಕ ಜಾಲತಾಣದಲ್ಲಿ ಸ್ಪಷ್ಟನೆ ನೀಡಿದೆ.

**<><*<><>*><>**

೭ ಸಾವಿರಕ್ಕೂ ಹೆಚ್ಚು ಪ್ರಕರಣಗಳು ಸುಪ್ರೀಂ ಕೋರ್ಟ್‌ನಲ್ಲಿ ೧೦ ವರ್ಷಗಳಿಂದ ಇತ್ಯರ್ಥವಾಗದೆ ಬಾಕಿ ಉಳಿದಿದೆ ಎಂದು ಸರ್ಕಾರ ಲೋಕಸಭೆಗೆ ಇಂದು ಮಾಹಿತಿ ನೀಡಿದೆ. ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್, ೧೦ ವರ್ಷಗಳಿಗೂ ಹೆಚ್ಚು ಕಾಲ ಬಾಕಿ ಇರುವ ಈ ಪ್ರಕರಣಗಳ ಪೈಕಿ ಸುಮಾರು ೬ ಸಾವಿರ ಸಿವಿಲ್ ಪ್ರಕರಣಗಳಾಗಿವೆ ಎಂದು ಮಾಹಿತಿ ನೀಡಿದರು. ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಳೆದ ವರ್ಷದ ಅಂತ್ಯದ ವೇಳೆಗೆ ದೇಶದಲ್ಲಿನ ತ್ವರಿತ ನ್ಯಾಯಾಲಯಗಳ ಮೂಲಕ ೩ ಲಕ್ಷ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಹೇಳಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**